ಸಮಾಜ ಕಲ್ಯಾಣ ಇಲಾಖೆಯಿಂದ ನಿವೃತ್ತಿ ಹೊಂದಿರುವ ನೌಕರರಿಗೆ ನಿವೃತ್ತಿ ವೇತನದ ಮಂಜೂರಾತಿಯ ಬಗ್ಗೆ

೬೨೪. ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್ (ಸಂಕೇಶ್ವರ).—ಮಾನ್ಯ ಸಮಾಜ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ೧೯೮೫ರ ಮೊದಲು ಶಿಶು ಕಲ್ಯಾಣ ಹಾಗೂ (ಕುಟುಂಬ ಯೋಜನೆ)ಯಲ್ಲಿ ಎಷ್ಟು ಜನ ಕೆಲಸವನ್ನು ಮಾಡುತ್ತಿದ್ದರು?

ಆ) ಕುಟುಂಬ ಮತ್ತು ಶಿಶು ಕಲ್ಯಾಣ ಯೋಜನೆಯು ಸಿಬ್ಬಂದಿ ವರ್ಗವನ್ನು ಸರ್ಕಾರಿ ನೌಕರ ಎಂದು ಪರಿಗಣಿಸಿದ ದಿನಾಂಕ ಯಾವುದು?

ಇ) ಸರ್ಕಾರದಿಂದ ದಿನಾಂಕ ೧೯೮೬ ರಿಂದ ೬೬ರವರಗೆ ಇಲಾಖೆಯಿಂದ ನಿವೃತ್ತಿ ಹೊಂದಿರುವ ಸಿಬ್ಬಂದಿ ವರ್ಗ ನಿವೃತ್ತಿ ವೇತನ ಮಂಜೂರಾತಿ ಮಾಡುವುದರಲ್ಲಿ ಅನ್ಯಾಯವಾಗಿದೆ ಎಂದು ಅದನ್ನು ಮರುಪರಿಶೀಲನೆ ಮಾಡಬೇಕೆಂದು ಕೋರಿ ಮನವಿಗಳೇನಾದರೂ ಬಂದಿವೆಯೇ?

ಈ) ೧೯೮೫ರ ನಂತರ ಕುಟುಂಬ ಮತ್ತು ಶಿಶು ಕಲ್ಯಾಣ ಯೋಜನೆ ವ್ಯಾಪ್ತಿಯಲ್ಲಿ ಎಷ್ಟು ಜನ ಸಿಬ್ಬಂದಿ ವರ್ಗದವರು ನಿವೃತ್ತಿ ಹೊಂದಿದ್ದಾರೆ?

ಶ್ರೀ ಜಿ. ಬಸವಣ ಪ್ಪ (ಸಮಾಜ ಕಲ್ಯಾಣ ಮಂತ್ರಿಗಳು).—

ಅ) ೩೦೪.

ಆ) ೯-೧೦-೮೫.

ಇ) ಬಂದಿವೆ.

ಈ) ೪.

ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯ ಗಳಲ್ಲಿ ಸ್ಥಳಾವಕಾಶ ಮಾಡಿಕೊಡುವ ಬಗ್ಗೆ

೬೪೯. ಶ್ರೀ ಪಂಪಾಪತಿ (ದಾವಣಗೆರೆ) —ಮಾನ್ಯ ಸಮಾಜ ಕಲ್ಯಾಣ ಮಂತ್ರಿಗಳು ಈ ಕೆಳ ಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಮಾಜ ಕಲ್ಯಾಣ ಇಲಾಖೆಯು ನಡೆಸುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ಅನುತ್ತೀರ್ಣ ರಾದ ವಿದ್ಯಾರ್ಥಿಗಳಿಗೆ ಸ್ಥಳ ನಿರಾಕರಿಸುವುದರಿಂದ ಬಡ ವಿದ್ಯಾರ್ಥಿಗಳಿಗೆ ಅನಾನುಕೂಲವಾಗಿರುವ ವಿಷಯ ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಈ ಅನುತ್ತೀರ್ಣ ವಿದ್ಯಾರ್ಥಿಗಳಿಗೆ ವಸತಿ ಸೌಕರ್ಯ ಒದಗಿಸಲು ಕ್ರಮ ಕೈಗೊಳ್ಳುವುದೆ?

ಶ್ರೀ ಜಿ. ಬಸವಣ್ಣಪ್ಪ (ಸಮಾಜ ಕಲ್ಯಾಣ ಸಚಿವರು).—

ಅ) ಬಂದಿದೆ.

ಆ) ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳಲ್ಲಿ ಒಂದು ವರ್ಷಕ್ಕೆ ಮಾತ್ರ ಪ್ರವೇಶ ನೀಡಲು ಕ್ರಮ ಕೈಗೊಳ್ಳಲಾಗಿದೆ.